**ದಿನಾಂಕ:25-06-2018ರಂದು ಅಪರಾಹ್ನ 03:30 ಗಂಟೆಗೆ ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಕೇಂದ್ರ ಯೋಜನೆಗಳು ಹಾಗೂ ಕೇಂದ್ರ ಪ್ರಾಯೋಜಿತ ಯೋಜನೆಗಳ ಸಾರ್ವಜನಿಕ ಹಣಕಾಸು ನಿರ್ವಹಣಾ ವ್ಯವಸ್ಥೆಯ (PFMS) ಆನ್‌ಬೋರ್ಡಿಂಗ್ ಮಾಡುವುದರೊಂದಿಗೆ ಕೇಂದ್ರ ಸರ್ಕಾರದ ತಂತ್ರಾಂಶವನ್ನು ಸಂಯೋಜಿಸುವ ಕುರಿತು ಜರುಗಿದ ಸಭೆಯ ನಡವಳಿಗಳು.**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು:**

1. ಡಾ॥ ಗಣೇಶ್ ಪ್ರಸಾದ್, ಉಪ-ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.
2. ಶ್ರೀ ಭಟ್, ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ. ಬೆಂಗಳೂರು.
3. ಶ್ರೀ ಪ್ರಶಾಂತ್, ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ. ಬೆಂಗಳೂರು.
4. ಶ್ರೀ ಮಹಮ್ಮದ್ ಇಮ್ತಿಯಾಜ್, ರಾಜ್ಯ ಯೋಜನಾ ವ್ಯವಸ್ಥಾಪಕರು(ಇ-ಪಂಚಾಯತ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ಶ್ರೀಮತಿ ಅಮೃತವರ್ಶಿಣಿ, ತಾಂತ್ರಿಕ ಸಮಾಲೋಚಕಿ(ಇ-ಪಂಚಾಯತ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು ಹಾಗೂ ಸಭೆಯ ವಿಷಯಸೂಚಿಗಳ ಬಗ್ಗೆ ವಿವರವಾಗಿ ಚರ್ಚಿಸಿ ಈ ಕೆಳಕಂಡ ವಿಷಯಗಳ ಬಗ್ಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಅವಗಾಹನೆಗೆ ಸಲ್ಲಿಸಲು ತೀರ್ಮಾನಿಸಲಾಯಿತು.

1. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು 14ನೇ ಹಣಕಾಸು ಆಯೋಗದ ಅನುದಾನವನ್ನು ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಲು ಮತ್ತು ಯೋಜನೆಯಡಿ ಭರಿಸಿದ ವೆಚ್ಚವನ್ನು ದಾಖಲೆ ಮಾಡಲು ಹಾಗೂ ವ್ಯವಸ್ಥೆಯಲ್ಲಿ ಪಾರದರ್ಶಕತೆಯನ್ನು ತರುವ ಸಲುವಾಗಿ ಕಡ್ಡಾಯವಾಗಿ PFMS (Public Financial Management System) ವ್ಯವಸ್ಥೆಯನ್ನು ಬಳಸಲು ಸೂಚಿಸಿರುತ್ತಾರೆ.

2. 14ನೇ ಹಣಕಾಸು ಆಯೋಗ ಅನುದಾನದಡಿ ಗ್ರಾಮ ಪಂಚಾಯತಿಗಳ ಹಣಕಾಸು ನಿರ್ವಹಣೆ, ಹೊಣೆಗಾರಿಕೆ ಮತ್ತು ಪಾರದರ್ಶಕತೆಯನ್ನು ತರುವ ಸಲುವಾಗಿ PFMS ಮತ್ತು PRIASoft ತಂತ್ರಾಂಶವನ್ನು ಕೇಂದ್ರ ಸರ್ಕಾರದ ಹಂತದಲ್ಲಿ ಸಂಯೋಜಿಸಲಾಗಿದ್ದು, PRIASoft ತಂತ್ರಾಂಶವನ್ನು ಕಡ್ಡಾಯವಾಗಿ ಬಳಸಲು ತಿಳಿಸಿರುತ್ತಾರೆ.

3. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಗ್ರಾಮ ಪಂಚಾಯತಿಗಳ ಲೆಕ್ಕಗಳ ನಿರ್ವಹಣೆಗಾಗಿ ಪಂಚತಂತ್ರವನ್ನು ಬಳಸಲಾಗುತ್ತಿದೆ. PRIASoft ತಂತ್ರಾಂಶದೊಂದಿಗೆ ಪಂಚತಂತ್ರ ತಂತ್ರಾಂಶದೊಂದಿಗೆ ಸಂಯೋಜನೆಗೊಳಿಸಲು ಅಥವಾ PFMS ತಂತ್ರಾಂಶದೊಂದಿಗೆ ಪಂಚತಂತ್ರ ತಂತ್ರಾಂಶವನ್ನು ಸಂಯೋಜನೆಗೊಳಿಸುವಂತೆ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ ಅನುಮತಿ ಕೋರಲಾಗಿತ್ತು. ಆದರೆ, PRIASoft ಮತ್ತು PFMS ತಂತ್ರಾಂಶವನ್ನು ಪಂಚತಂತ್ರ ತಂತ್ರಾಂಶದೊಂದಿಗೆ ಸಂಯೋಜನೆಗೊಳಿಸಲು ಸಾಧ್ಯವಿಲ್ಲವೆಂದು ಕೇಂದ್ರ ಸರ್ಕಾರವು ತಿಳಿಸಿರುತ್ತದೆಂದು ಸಭೆಯ ಗಮನಕ್ಕೆ ತರಲಾಯಿತು.

4. PRIASoft ತಂತ್ರಾಂಶವನ್ನು ಬಳಸದೇ ಇದ್ದಲ್ಲಿ 14ನೇ ಹಣಕಾಸು ಆಯೋಗದ ಅನುದಾನವನ್ನು 2018-19ನೇ ಸಾಲಿನಿಂದ ರಾಜ್ಯಕ್ಕೆ ಬಿಡುಗಡೆಗೊಳಿಸುವುದಿಲ್ಲವೆಂದು ಕೇಂದ್ರ ಸರ್ಕಾರವು ತಿಳಿಸಿರುತ್ತದೆ. ಆದುದರಿಂದ, PRIASoft ತಂತ್ರಾಂಶವನ್ನು ಬಳಸುವ ಸಲುವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಅವಗಾಹನೆಗೆ ತಂದು ಅನುಮೋದನೆಯ ನಂತರ ಕ್ರಮ ವಹಿಸಲು ತಿಳಿಸಲಾಯಿತು.

5. ಭಾರತ ಸರ್ಕಾರದ ನಿರ್ದೇಶನದಂತೆ PRIASoft ತಂತ್ರಾಂಶದಲ್ಲಿಯೇ 2017-18ನೇ ಸಾಲಿನ 14ನೇ ಹಣಕಾಸು ಆಯೋಗದ ಅನುದಾನದ ವಾರ್ಷಿಕ ಲೆಕ್ಕಪತ್ರಗಳನ್ನು ಮುಕ್ತಾಯಗೊಳಿಸಲು ತಿಳಿಸಿರುತ್ತಾರೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಎನ್.ಐ.ಸಿ.ಯ ಹಿರಿಯ ತಾಂತ್ರಿಕ ನಿರ್ದೇಶಕರು 2017-18ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯು PRIASoft ತಂತ್ರಾಂಶವನ್ನು ಬಳಸದೇ ಇದ್ದುದರಿಂದ, 2017-18ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳನ್ನು ಮುಕ್ತಾಯಗೊಳಿಸಲು ಸಾಧ್ಯವಿಲ್ಲವೆಂದು ತಿಳಿಸಿದರು. ಆದ್ದರಿಂದ, PRIASoft ತಂತ್ರಾಂಶವನ್ನು ಬಳಸಲು ನಿರ್ಧರಿಸಿದ್ದಲ್ಲಿ 2018-19ನೇ ಸಾಲಿನಿಂದ ಬಳಸುವುದಾಗಿ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯಕ್ಕೆ ಪತ್ರದ ಮೂಲಕ ತಿಳಿಸುವುದು ಸೂಕ್ತವೆಂದು ರಾಜ್ಯ ಯೋಜನಾ ವ್ಯವಸ್ಥಾಪಕರು ತಿಳಿಸಿದರು.

6. PRIASoft ತಂತ್ರಾಂಶವನ್ನು ಬಳಸಿದ್ದಲ್ಲಿ PRIASoft ತಂತ್ರಾಂಶದಲ್ಲಿರುವ ಮಾಹಿತಿಯನ್ನು ಪಂಚತಂತ್ರ ತಂತ್ರಾಂಶಕ್ಕೆ ವರ್ಗಾಯಿಸಲು (push) ಮಾಡಲು ಪಂಚಾಯತ್ ರಾಜ್ ಮಂತ್ರಾಲಯದ ಅನುಮತಿ ಕೋರಬಹುದಾಗಿದೆ ಎಂದು ರಾಜ್ಯ ಯೋಜನಾ ವ್ಯವಸ್ಥಾಪಕರು ಅಭಿಪ್ರಾಯಪಟ್ಟರು.

7. PRIASoft ತಂತ್ರಾಂಶವನ್ನು ಬಳಸಿದ್ದಲ್ಲಿ, ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಯೋಜನಾ ವ್ಯವಸ್ಥಾಪಕರು, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಸಹಾಯಕರು ಮತ್ತು ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ತರಬೇತಿ ನೀಡಬೇಕಾಗುತ್ತದೆ ಎಂದು ರಾಜ್ಯ ಯೋಜನಾ ವ್ಯವಸ್ಥಾಪಕರು ತಿಳಿಸಿದರು. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಗಮನಕ್ಕೆ ತಂದ ನಂತರ ಬೆಂಗಳೂರಿನ ಎನ್.ಐ.ಸಿ.ಯ ಹಿರಿಯ ತಾಂತ್ರಿಕ ನಿರ್ದೇಶಕರು ಪಂಚಾಯತ್ ರಾಜ್ ಮಂತ್ರಾಲಯದೊಂದಿಗೆ ವೀಡಿಯೋ ಸಂವಾದವನ್ನು ಆಯೋಜಿಸಿ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿ ಅಧಿಕಾರಿಗಳಿಗೆ ತರಬೇತಿ ನೀಡುವುದು ಹಾಗೂ ರಾಜ್ಯ ಮಟ್ಟದಲ್ಲಿ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿ ಅಧಿಕಾರಿಗಳಿಗೆ ಮತ್ತೊಮ್ಮೆ Hands on Training ನೀಡುವುದು ಸೂಕ್ತವೆಂದು ತಿಳಿಸಿದರು.

8. PFMS ತಂತ್ರಾಂಶದ ಮೂಲಕ 14ನೇ ಹಣಕಾಸು ಆಯೋಗದ ಅನುದಾನದಡಿ ವೆಚ್ಚ ಭರಿಸಲು ಸಂಬಂಧಿಸಿದ ಗುತ್ತಿಗೆದಾರರು ಹಾಗೂ ಮಾರಾಟಗಾರರ ಮಾಹಿತಿಯನ್ನು ಅಳವಡಿಸುವ ಬಗ್ಗೆ ತರಬೇತಿ ಆಯೋಜಿಸಬೇಕಾಗುತ್ತದೆ ಎಂದು ರಾಜ್ಯ ಯೋಜನಾ ವ್ಯವಸ್ಥಾಪಕರು ತಿಳಿಸಿದರು.

ಅದರಂತೆ, ಜಿಲ್ಲಾ ಪಂಚಾಯತಿ ಹಂತದಲ್ಲಿ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ್‌ನ ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಸಹಾಯಕರು ಮತ್ತು ಡಾಟಾ ಎಂಟ್ರಿ ಆಪರೇಟರ್‌ಗಳಿಗೆ NIC ಅಧಿಕಾರಿಗಳ ಸಹಯೋಗದೊಂದಿಗೆ ತರಬೇತಿ ನಡೆಸುವುದು ಸೂಕ್ತವೆಂದು ರಾಜ್ಯ ಯೋಜನಾ ವ್ಯವಸ್ಥಾಪಕರು ಅಭಿಪ್ರಾಯಪಟ್ಟರು. ಮೇಲ್ಕಂಡ ಎಲ್ಲಾ ವಿಷಯಗಳ ಬಗ್ಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಗಮನಕ್ಕೆ ತಂದು ಅವರ ಅನುಮೋದನೆಯನ್ನು ಪಡೆದುಕೊಂಡ ನಂತರ ಅಗತ್ಯ ಕ್ರಮ ಕೈಗೊಳ್ಳಬಹುದು ಎಂದು ನಿರ್ದೇಶಕರು(ಪಂ.ರಾಜ್-2)ರವರು ಸಭೆಗೆ ತಿಳಿಸಿದರು.

ಕೊನೆಯಲ್ಲಿ ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಸಂ:ಗ್ರಾಅಪ 348 ಜಿಪಸ 2017

2/7/18

(ಕೆ.ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್-2)ಹಾಗೂ
ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.

2. ನಿರ್ದೇಶಕರು, ಇ–ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3. ಶ್ರೀ ಭಟ್, ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ, ವಿಶ್ವೇಶ್ವರಯ್ಯ ಟವರ್, ಅಂಬೇಡ್ಕರ್ ವೀದಿ, ಬೆಂಗಳೂರು.
4. ಶ್ರೀ ಪ್ರಶಾಂತ್, ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ, ವಿಶ್ವೇಶ್ವರಯ್ಯ ಟವರ್, ಅಂಬೇಡ್ಕರ್ ವೀದಿ, ಬೆಂಗಳೂರು.
5. ರಾಜ್ಯ ಯೋಜನಾ ವ್ಯವಸ್ಥಾಪಕರು, ಇ–ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ/ಸಹಾಯಕರು.
2. ನಿರ್ದೇಶಕರು(ಪಂ.ರಾಜ್–2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.